**Bangalore**
**Regional News**
**26.08.2026 / 18.40 hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

<u>ಮುಖ್ಯಾಂಶಗಳು</u>

1. ರಾಜ್ಯದಲ್ಲಿ ಆಹಾರ ಸುರಕ್ಷತೆ ಕುರಿತಂತೆ ಶೀಘ್ರವೇ ಮಾರ್ಗಸೂಚಿ ಬಿಡುಗಡೆ ; ಆರೋಗ್ಯ ಸಚಿವ ಯು.ಟಿ.ಖಾದರ್
2. ರಾಷ್ಟ್ರೀಯ ಕ್ರೀಡಾ ದಿನಾಚರಣೆ ಹಿನ್ನೆಲೆ ; ರಾಜ್ಯದ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳೊಂದಿಗೆ ನಾಳೆ ಪ್ರಧಾನಿ ಸಂವಾದ
3. ಜಿಲ್ಲೆಗಳ ಸಮಗ್ರ ಅಭಿವೃದ್ಧಿ ಕುರಿತಂತೆ ಮೇಲ್ಮನೆ ಸದಸ್ಯರೊಂದಿಗೆ ಮುಖ್ಯಮಂತ್ರಿ ಚರ್ಚೆ
4. ಸಚಿವ ಬಿ.ನಾಗೇಂದ್ರ ರಾಜೀನಾಮೆ ನೀಡುವವರೆಗೂ ಬಿಜೆಪಿ ಹೋರಾಟ – ಸರ್ಕಾರಕ್ಕೆ ಬಿ.ವೈ.ವಿಜಯೇಂದ್ರ ಎಚ್ಚರಿಕೆ

---

ರಾಜ್ಯದಲ್ಲಿ ಆಹಾರ ಸುರಕ್ಷತೆ ಕುರಿತಂತೆ ಶೀಘ್ರದಲ್ಲೇ ಸರ್ಕಾರ ಮಾರ್ಗಸೂಚಿಗಳನ್ನು ಹೊರಡಿಸಲಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನ ಬೌರಿಂಗ್ ಕ್ಲಬ್, ಸೆಂಚುರಿ ಕ್ಲಬ್, ಕೆಎಸ್‌ಸಿಎ ಕ್ಲಬ್ ಸೇರಿದಂತೆ 8 ಪ್ರಮುಖ ಕ್ಲಬ್‌ಗಳಲ್ಲಿ ಆಹಾರ ಸುರಕ್ಷತಾ ತಪಾಸಣೆ ನಡೆಸಲಾಗಿದ್ದು, ನೈರ್ಮಲ್ಯವಿಲ್ಲದ ಕ್ಲಬ್‌ಗಳಿಗೆ ನೋಟಿಸ್ ನೀಡಲಾಗಿದೆ ಎಂದು ಹೇಳಿದ್ದಾರೆ.

ತಪಾಸಣೆಯ ಸಮಯದಲ್ಲಿ ಅಧಿಕಾರಿಗಳು ಕುಡಿಯುವ ನೀರು ಮತ್ತು ಅಡಿಗೆ ಎಣ್ಣೆಯ ಮಾದರಿಗಳನ್ನು ಸಂಗ್ರಹಿಸಿದ್ದು, ಈ ಮಾದರಿಗಳನ್ನು ವಿಶ್ಲೇಷಣೆಗಾಗಿ ಸರ್ಕಾರಿ ಆಹಾರ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ ಎಂದು ತಿಳಿಸಿದ್ದಾರೆ.

---

ರಾಷ್ಟ್ರೀಯ ಕ್ರೀಡಾ ದಿನಾಚರಣೆ–2026 ರ ಅಂಗವಾಗಿ 'ಮೇರಾ ಯುವ ಭಾರತ್' ಆಯೋಜಿಸಿರುವ 'ಖೇಲೋ ಇಂಡಿಯಾ ಸಂವಾದ' ಕಾರ್ಯಕ್ರಮವನ್ನುದ್ದೇಶಿಸಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಾಳೆ ವರ್ಚುವಲ್ ಮೂಲಕ ಭಾಷಣ ಮಾಡಲಿದ್ದಾರೆ.

ರಾಜ್ಯದ ಬಳ್ಳಾರಿ, ಮಂಗಳೂರು, ಮೈಸೂರು, ಬೆಂಗಳೂರು ನಗರ, ದಕ್ಷಿಣಕನ್ನಡ, ಧಾರವಾಡ, ಚಿತ್ರದುರ್ಗ, ರಾಮನಗರ, ವಿಜಯಪುರ, ರಾಯಚೂರು, ಹಾಸನ, ಚಿಕ್ಕಮಗಳೂರು, ಕಲಬುರಗಿ, ಬೆಳಗಾವಿ, ಗದಗ ಮತ್ತು ಉಡುಪಿ ಜಿಲ್ಲೆಯ ಎರಡು ಕಾಲೇಜುಗಳ ವಿದ್ಯಾರ್ಥಿಗಳೊಂದಿಗೆ ಪ್ರಧಾನಿ ಸಂವಾದ ನಡೆಸಲಿದ್ದಾರೆ.

---

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಧ್ಯಕ್ಷತೆಯಲ್ಲಿ ಗೃಹಕಚೇರಿ ಕೃಷ್ಣಾದಲ್ಲಿಂದು ರಾಜ್ಯದ ಎಲ್ಲಾ ಜಿಲ್ಲೆಗಳ ಸಮಗ್ರ ಅಭಿವೃದ್ಧಿ ಕುರಿತಂತೆ ವಿಧಾನಪರಿಷತ್ ಸದಸ್ಯರೊಂದಿಗೆ ಸಭೆ ನಡೆಯಿತು.

ಸಭೆಯಲ್ಲಿ ಹಲವು ಮಹತ್ವದ ವಿಷಯಗಳ ಬಗ್ಗೆ ಚರ್ಚೆ ನಡೆಸಿದ್ದಾರೆ. ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ವಿಧಾನಪರಿಷತ್ ಉಪಸಭಾಪತಿ ಉಮಾಶ್ರೀ, ಸಚಿವ ಜಮೀರ್ ಅಹಮ್ಮದ್ ಖಾನ್, ಪರಿಷತ್ ಸದಸ್ಯರಾದ ಪುಟ್ಟಣ್ಣ, ಚನ್ನರಾಜ ಹಟ್ಟಿಹೊಳಿ, ಗೋವಿಂದರಾಜು ಸೇರಿದಂತೆ ಹಲವರು ಸಭೆಯಲ್ಲಿ ಉಪಸ್ಥಿತರಿದ್ದರು.

---

ಸಚಿವ ಬಿ.ನಾಗೇಂದ್ರ ರಾಜೀನಾಮೆ ವಿಚಾರ ಇಟ್ಟುಕೊಂಡು ಬಿಜೆಪಿ ಸದನದ ಸಮಯ ಹಾಳು ಮಾಡಿದ್ದು, ಖಂಡನಾರ್ಹ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಬಿ.ಖಂಡ್ರೆ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬರ, ನಿರುದ್ಯೋಗ ಸೇರಿದಂತೆ ಅನೇಕ ವಿಚಾರಗಳ ಕುರಿತು ಬಿಜೆಪಿ ಸದನದಲ್ಲಿ ಚರ್ಚೆ ನಡೆಸಬೇಕಿತ್ತು.

ನಾಗೇಂದ್ರ ವಿಚಾರ ಕುರಿತಂತೆಯೂ ಸರ್ಕಾರ ಚರ್ಚೆ ನಡೆಸಲು ಸಿದ್ಧವಿದ್ದರೂ ಬಿಜೆಪಿ ಅವಕಾಶ ನೀಡಿಲ್ಲ ಎಂದು ಅಸಮಧಾನ ವ್ಯಕ್ತಪಡಿಸಿದ್ದಾರೆ.

---

ರಾಜ್ಯದ ಮೂಲಕ ಮಾತ್ರ ದೇಶದ ಪ್ರಗತಿ ಸಾಧ್ಯ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಭಿಪ್ರಾಯಪಟ್ಟಿದ್ದಾರೆ.

ಬೆಂಗಳೂರಿನಲ್ಲಿ ಇಂದು ಖಾಸಗಿ ಸುದ್ದಿಸಂಸ್ಥೆಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಅವರು, ಇನ್ನೆರಡು ದಿನಗಳಲ್ಲಿ ಸಂಪುಟದಲ್ಲಿ ಮಹಿಳೆಯರಿಗೆ ಸ್ಥಾನ ನೀಡುವುದು ಕಾಂಗ್ರೆಸ್ ಸರ್ಕಾರದ ಬದ್ಧತೆ ಎಂದು ತಿಳಿಸಿದ್ದಾರೆ.

ಮಹಾರಾಷ್ಟ್ರ, ಗುಜರಾತ್‌ಗೆ ಹೋಲಿಕೆ ಮಾಡಿದರೆ ಕರ್ನಾಟಕ ಸೇರಿದಂತೆ ದಕ್ಷಿಣ ಭಾರತದ ರಾಜ್ಯಗಳಿಗೆ ಕೇಂದ್ರ ಸರ್ಕಾರ ತಾರತಮ್ಯ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ. ಕ್ಷೇತ್ರ ಮರುವಿಂಗಡಣೆ ವಿಚಾರದಲ್ಲಿ ಕೇಂದ್ರದ ತೀರ್ಮಾನವನ್ನು ಒಪ್ಪಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

ಬೆಂಗಳೂರು ಮೂಲಸೌಕರ್ಯ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಸಂಚಾರ ದಟ್ಟಣೆ ವಿಚಾರದಲ್ಲಿ ಈಗಿರುವ ರಸ್ತೆಗಳಿಂದ ವಾಹನ ದಟ್ಟಣೆಯನ್ನು ನಿಭಾಯಿಸಲು ಆಗುತ್ತಿಲ್ಲ ಎಂದು ತಿಳಿಸಿದ್ದಾರೆ. ಬೆಂಗಳೂರಿನಲ್ಲಿರುವ ಉದ್ಯಾನವನಗಳ ಶೇಕಡ 5ರಷ್ಟು ಪ್ರದೇಶವನ್ನು ಸಾರ್ವಜನಿಕ ಉದ್ದೇಶಕ್ಕೆ ಬಳಸಲಾಗುವುದು ಎಂದು ಸಮರ್ಥಿಸಿಕೊಂಡಿದ್ದಾರೆ.

---

ರಾಜ್ಯದಲ್ಲಿ ಬರಪರಿಸ್ಥಿತಿಯ ಸಮಗ್ರ ಅವಲೋಕನ ನಡೆಯುತ್ತಿದೆ ಎಂದು ಕಂದಾಯ ಸಚಿವ ಹಾಗೂ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕುಡಿಯುವ ನೀರಿನ ಸಮಸ್ಯೆಯಿದ್ದು, ರೈತರಿಗೆ ಬೆಳೆ ನಷ್ಟವಾಗಿದೆ. ಆದರೆ ವಿರೋಧ ಪಕ್ಷದವರು ಸದನದಲ್ಲಿ ಚರ್ಚೆ ಮಾಡಿ ಸಲಹೆಗಳನ್ನು ನೀಡುವ ಬದಲು ರಾಜಕೀಯ ಮಾಡಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಇದೇ ವೇಳೆ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುವ ವೇಳೆ ಪರಮೇಶ್ವರ್ ಅವರನ್ನು ಉಪಮುಖ್ಯಮಂತ್ರಿಯನ್ನಾಗಿ ಮಾಡಿ ಎಂದು ಹೈಕಮಾಂಡ್ ಅನ್ನು ಒತ್ತಾಯಿಸಿರುವುದು ನಿಜ ಎಂದು ತಿಳಿಸಿದ್ದಾರೆ.

ಸಂಪುಟ ಪುನರ್ರಚನೆ ಕೇವಲ ಊಹಾಪೋಹ ಎಂದು ಪರಮೇಶ್ವರ್ ಹೇಳಿದ್ದಾರೆ.

---

ವಾಲ್ಮೀಕಿ ನಿಗಮದ ಹಗರಣದಲ್ಲಿ ದೊಡ್ಡ ದೊಡ್ಡ ತಿಮಿಂಗಿಲಗಳ ಕೈವಾಡವಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯ ಪ್ರತಿಭಟನೆಗಳು ಮತ್ತು ಎಚ್ಚರಿಕೆಗಳನ್ನು ಹಗುರವಾಗಿ ಪರಿಗಣಿಸದಂತೆ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

ನಾಗೇಂದ್ರ ನಿರಪರಾಧಿ ಎಂದು ಸಾಬೀತಾದರೆ ಅವರನ್ನು ಮುಖ್ಯಮಂತ್ರಿಯನ್ನಾಗಿ ಮಾಡುವಂತೆ ಸವಾಲು ಹಾಕಿದ್ದಾರೆ. ಜಾರಿ ನಿರ್ದೇಶನಾಲಯದ ಆರೋಪ ಪಟ್ಟಿಯಲ್ಲಿ ನಾಗೇಂದ್ರ ಅವರ ಹೆಸರಿದೆ ಎಂದು ತಿಳಿಸಿದ್ದಾರೆ.

ನಾಗೇಂದ್ರ ರಾಜೀನಾಮೆ ನಿಡುವವರೆಗೂ ಬಿಜೆಪಿಯ ಹೋರಾಟ ಮುಂದುವರೆಯಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

---

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಮದ್ದೂರು ವನ್ಯಜೀವಿ ವಲಯ ವ್ಯಾಪ್ತಿಯ ಚೆಂಡುಮಲ್ಲಿಗೆ ಜಮೀನಿನಲ್ಲಿ ಬೀಡುಬಿಟ್ಟಿದ್ದ ಹುಲಿಯನ್ನು ಅರಣ್ಯ ಇಲಾಖೆ ಸೆರೆ ಹಿಡಿದಿದೆ.

ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ವೇಳೆ ಹುಲಿ ಕಾಣಿಸಿಕೊಂಡ ಮಾಹಿತಿ ಮೇರೆಗೆ ಅರಣ್ಯಾಧಿಕಾರಿಗಳು ಕಾರ್ಯಾಚರಣೆ ನಡೆಸಿ ಹುಲಿ ಸೆರೆ ಹಿಡಿದಿದ್ದಾರೆ. ಸೆರೆ ಸಿಕ್ಕ ಹುಲಿ ಹೆಣ್ಣಾಗಿದ್ದು 10-12 ವರ್ಷದ್ದು ಎಂದು ಅಂದಾಜಿಸಲಾಗಿದೆ. ಸೆರೆಸಿಕ್ಕ ಹುಲಿಯನ್ನು ಮೈಸೂರಿನ ಕೂರ್ಗಳ್ಳಿ ಪುನರ್ವಸತಿ ಕೇಂದ್ರಕ್ಕೆ ರವಾನೆ ಮಾಡಲಾಗಿದೆ ಎಂದು ಮದ್ದೂರು ವಲಯ ಅರಣ್ಯಾಧಿಕಾರಿ ಮಾಹಿತಿ ನೀಡಿದ್ದಾರೆ.

---

ರಾಜ್ಯದ ಹಲವೆಡೆ ಇಂದು ಮುಸ್ಲಿಂ ಬಾಂಧವರ ಪವಿತ್ರ ಈದ್ ಮಿಲಾದ್ ಅನ್ನು ಶ್ರದ್ಧಾ ಭಕ್ತಿ, ಸಡಗರಗಳಿಂದ ಆಚರಿಸಲಾಗುತ್ತಿದೆ.

ಈದ್ ಮಿಲಾದ್ ಹಬ್ಬವನ್ನು ಗದಗ ಜಿಲ್ಲ್ಯಾದ್ಯಂತ ಮುಸ್ಲಿಂ ಬಾಂಧವರು ಸಡಗರ, ಸಂಭ್ರಮದಿಂದ ಆಚರಿಸಿದರು.

ವಿಜಯಪುರ ಜಿಲ್ಲೆಯಾದ್ಯಂತ ಈದ್ ಮಿಲಾದ್ ಹಬ್ಬವನ್ನು ಮುಸ್ಲಿಂ ಬಾಂಧವರು ವಿಶೇಷ ಪ್ರಾರ್ಥನೆ ಸಲ್ಲಿಸುವ ಮೂಲಕ ಆಚರಿಸಿದರು.

ಉತ್ತರಕನ್ನಡ ಜಿಲ್ಲೆಯಲ್ಲಿ ಈದ್ ಮಿಲಾದ್ ಹಬ್ಬವನ್ನು ಆಚರಿಸಲಾಯಿತು. ಕಾರವಾರ, ಶಿರಸಿ ಹಾಗೂ ಭಟ್ಕಳ ಸೇರಿದಂತೆ ಹಲವೆಡೆಗಳಲ್ಲಿ ಈದ್ ಮಿಲಾದ್ ಹಬ್ಬದ ಪ್ರಯುಕ್ತ ಬೃಹತ್ ಮೆರವಣಿಗೆ ನಡೆಸಲಾಯಿತು.

ವಿಜಯನಗರ ಜಿಲ್ಲೆ ಹೊಸಪೇಟೆಯಲ್ಲಿ ಈದ್ ಮಿಲಾದ್-ಉನ್-ನಬಿ ಹಬ್ಬವನ್ನು ಮುಸ್ಲಿಂ ಬಾಂಧವರು ಶ್ರದ್ಧಾ ಮತ್ತು ಭಕ್ತಿ ಪೂರ್ವಕವಾಗಿ ಆಚರಿಸಿದರು.

---

<u>ಸಂಕ್ಷಿಪ್ತ ಸುದ್ದಿಗಳು</u>

1. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿದ ರಾಜ್ಯ ವಕೀಲರ ಪರಿಷತ್ತಿನ ಸದಸ್ಯರು ಇಂದು ವಿವಿಧ ವಿಷಯಗಳ ಕುರಿತು ಚರ್ಚೆ ನಡೆಸಿದರು.
2. ವಿಜಯಪುರ ಜಿಲ್ಲೆಯ ನಿಡಗುಂದಿ ತಾಲೂಕಿನ ಅಲಮಟ್ಟಿ ಕೃಷ್ಣ ಜಲಾಶಯಕ್ಕೆ ಮಹಾರಾಷ್ಟ್ರದ ಕೊಯ್ನಾ ಅಣೆಕಟ್ಟು ಸೇರಿದಂತೆ ವಿವಿಧ ಬ್ಯಾರೆಜ್‌ಗಳಿಂದ 28 ಸಾವಿರದ 746 ಕ್ಯೂಸೆಕ್ ನೀರು ಹರಿದು ಬರುತ್ತಿದೆ. ಈ ಹಿನ್ನೆಲೆಯಲ್ಲಿ ಜಲಾಶಯದಿಂದ 22 ಸಾವಿರದ 658 ಕ್ಯೂಸೆಕ್ ನೀರನ್ನು ಯಾದಗಿರಿ ಜಿಲ್ಲೆಯ ನಾರಾಯಣಪುರ ಜಲಾಶಯಕ್ಕೆ ಹರಿ ಬಿಡಲಾಗುತ್ತಿದೆ.
3. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ಹಾವೇರಿ ಜಿಲ್ಲೆ ಶೇಕಡ 91.38ರಷ್ಟು ಸಾಧನೆ ಮಾಡುವ ಮೂಲಕ ರಾಜ್ಯದಲ್ಲಿ ಎರಡನೇ ಸ್ಥಾನದಲ್ಲಿದೆ ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

4. ಕೋಲಾರ ಜಿಲ್ಲೆಯ ಮುಳಬಾಗಿಲು ತಾಲೂಕಿನ ಪೆತ್ತಾಂಡಹಳ್ಳಿ ಗ್ರಾಮದಲ್ಲಿ 'ಕಾನೂನು ಸಲಹಾ ಕೇಂದ್ರ'ವನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಪ್ರಭು ನೀಲಾಚಾರಿ ಬಡಿಗೇರ ಉದ್ಘಾಟಿಸಿದರು.

5. ವಿಜಯಪುರ ನಗರ ವ್ಯಾಪ್ತಿಯಲ್ಲಿ ಅಗತ್ಯಕ್ಕೆ ತಕ್ಕಂತೆ ಗಣೇಶ ಮೂರ್ತಿಗಳ ವಿಸರ್ಜನೆಗಾಗಿ ಶಾಶ್ವತ ಹೊಂಡ ನಿರ್ಮಿಸಲು ಸೂಕ್ತ ಜಾಗ ಗುರುತಿಸಿ, ಸ್ಥಳ ವೀಕ್ಷಣೆ ನಡೆಸಿ ಅಂತಿಮ ತೀರ್ಮಾನ ಕೈಗೊಳ್ಳಲು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

---

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ದೌರ್ಜನ್ಯ ತಡೆ ಅಧಿನಿಯಮದಡಿಯಲ್ಲಿ ದಾಖಲಾದ ಪ್ರಮುಖ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಮರ್ಥವಾಗಿ ವಾದ ಮಂಡಿಸಲು ನುರಿತ ಹಾಗೂ ಅನುಭವಿ ನ್ಯಾಯವಾದಿಗಳನ್ನು ವಿಶೇಷ ಸಾರ್ವಜನಿಕ ಅಭಿಯೋಜಕರನ್ನಾಗಿ ನಿಯಮಾನುಸಾರ ನೇಮಕ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ತಮ್ಮ ಸ್ವ-ವಿವರವುಳ್ಳ ಅರ್ಜಿ ಹಾಗೂ ಇತರೆ ವಿವರಗಳನ್ನೊಳಗೊಂಡ ದಾಖಲಾತಿಗಳೊಂದಿಗೆ ಸೆಪ್ಟೆಂಬರ್ 7ರ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಇಲಾಖೆಯ ಕಚೇರಿ ಪ್ರಕಟಣೆ ತಿಳಿಸಿದೆ.

___ ಮುಕ್ತಾಯ ___